# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯಪಾಲರ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎರಡು ಎ.ಡಿ.ಸಿ (ADC) ಹುದ್ದೆಗಳಿಗೆ ಸಮವಸ್ತ್ರ ಭತ್ಯೆ ಮಂಜೂರು ಮಾಡುವ ಕುರಿತು.

ಓದಲಾಗಿದೆ:

1. ಸರ್ಕಾರಿ ಆದೇಶ ಸಂಖ್ಯೆ: ಆಇ 06 ಎಸ್ ಆರ್ ಪಿ 2011, ದಿನಾಂಕ:24.01.2011.
2. ರಾಜ್ಯಪಾಲರ ಅಧೀನ ಕಾರ್ಯದರ್ಶಿ, ರಾಜಭವನ, ಬೆಂಗಳೂರು ರವರ ಪತ್ರ ಸಂಖ್ಯೆ: ಜಿಎಸ್ 02 ಇಎಸ್‌ಟಿ 2011, ದಿನಾಂಕ:5.02.2011.

<u>ಪ್ರಸ್ತಾವನೆ:</u>

ಮೇಲೆ (1) ರಲ್ಲಿ ಓದಲಾದ ದಿನಾಂಕ:24.01.2011 ರ ಸರ್ಕಾರಿ ಆದೇಶದಲ್ಲಿ, ರಾಜ್ಯಪಾಲರ ಸಚಿವಾಲಯದ ಕೆಲವು ಹುದ್ದೆಗಳಿಗೆ ಪ್ರತಿ ಎರಡು ವರ್ಷಗಳಿಗೊಮ್ಮೆ ಸಮವಸ್ತ್ರ ಭತ್ಯೆ ಮಂಜೂರು ಮಾಡಲಾಗಿರುತ್ತದೆ. ಮೇಲೆ(2) ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ರಾಜ್ಯಪಾಲರ ಸಚಿವಾಲಯದ ಇತರೆ ಅಧಿಕಾರಿಗಳಿಗೆ ಸಮವಸ್ತ್ರ ಭತ್ಯೆ ಮಂಜೂರು ಮಾಡಿರುವಂತೆಯೇ, ಸದರಿ ಸಚಿವಾಲಯದಲ್ಲಿರುವ ಇಬ್ಬರು ಎಡಿಸಿಗಳಿಗೆ(ADC) "ಗ್ರೂಪ್ ಎ" ಅಧಿಕಾರಿಗಳಿಗೆ ನೀಡಿರುವ ದರದಲ್ಲಿ ಎರಡು ವರ್ಷಗಳಿಗೊಮ್ಮೆ ರೂ.12000/- ಗಳ ಸಮವಸ್ತ್ರ ಭತ್ಯೆಯನ್ನು ಮಂಜೂರು ಮಾಡುವಂತೆ ಕೋರಿರುತ್ತಾರೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 33 ಎಸ್‌ಆರ್‌ಪಿ 2011,**
**ಬೆಂಗಳೂರು, ದಿನಾಂಕ:24.09.2011**

ಕರ್ನಾಟಕ ರಾಜ್ಯಪಾಲರ ಸಚಿವಾಲಯದಲ್ಲಿ ಇರುವ ಎರಡು ಎಡಿಸಿ ಹುದ್ದೆಗಳಿಗೆ, ಪ್ರತಿ ಎರಡು ವರ್ಷಗಳಿಗೊಮ್ಮೆ ಸಮವಸ್ತ್ರ ಭತ್ಯೆಯಾಗಿ ರೂ.12000/-(ಹನ್ನೆರಡು ಸಾವಿರ ರಾಪಾಯಿಗಳು) ಗಳನ್ನು ತತ್‌ಕ್ಷಣದಿಂದ ಜಾರಿಗೆ ಬರುವಂತೆ ಮಂಜೂರು ಮಾಡಲು ಸರ್ಕಾರವು ಹರ್ಷಿಸುತ್ತದೆ.

ಈ ಮಂಜೂರಾತಿಯು, ಈ ಹುದ್ದೆಯನ್ನು ಹೊಂದಿರುವ ಅಧಿಕಾರಿಗಳು ಕರ್ನಾಟಕ ರಾಜ್ಯಪಾಲರ ಸಚಿವಾಲಯದಲ್ಲಿ ಕಾರ್ಯನಿರ್ವಹಿಸುವ ಅವಧಿಯಲ್ಲಿ ಸಮವಸ್ತ್ರ ಭತ್ಯೆಯನ್ನು ತಮ್ಮ ಮಾತೃ ಇಲಾಖೆಯಿಂದ ಪಡೆಯಬಾರದು ಎಂಬ ಷರತ್ತಿಗೊಳಪಟ್ಟಿರುತ್ತದೆ.

ಇದರಿಂದ ಉಂಟಾಗುವ ಹೆಚ್ಚುವರಿ ವೆಚ್ಚವನ್ನು ರಾಜ್ಯಪಾಲರ ಸಚಿವಾಲಯಕ್ಕೆ ಒದಗಿಸಿರುವ ಅನುದಾನದಲ್ಲಿಯೇ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸುಂದರ ರಾಜ ಗುಪ್ತ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಗೆ,

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು
2. ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು, ರಾಜಭವನ
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
4. ಪ್ರಧಾನ ಮಹಾಲೇಖಪಾಲರು(ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು(ಕಂದಾಯ ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ), ಕರ್ನಾಟಕ ಬೆಂಗಳೂರು
6. ಮಹಾಲೇಖಪಾಲರು(ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು
7. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು
8. ಎ.ಡಿ.ಸಿ, ರಾಜ್ಯಪಾಲರ ಸಚಿವಾಲಯ
9. ಪ್ರಾಜೆಕ್ಟ್ ಆಫೀಸರ್, ಹೆಚ್.ಎಂ.ಆರ್.ಎಸ್. ಕೊಠಡಿ ಸಂಖ್ಯೆ:145ಎ, ಬಹುಮಹಡಿ ಕಟ್ಟಡ, ಬೆಂಗಳೂರು
10. ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ
11. ನಿರ್ದೇಶಕರು, ರಾಜ್ಯ ಪತ್ರಾಗಾರ ಇಲಾಖೆ
12. ವಾರಪತ್ರ/ಶಾಖೆಯ ರಕ್ಷಾ ಕಡತ